**National**
**Kannada**
**31.01.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ನಾಳೆ ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್: ಮುಂಗಡಪತ್ರ ಮಂಡನೆಯ ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿರುವ ಸಚಿವೆ ನಿರ್ಮಲಾ ಸೀತಾರಾಮನ್
2. ಸಂತ ಗುರು ರವಿದಾಸರ ೬೪೯ನೇ ಜನ್ಮ ದಿನಾಚರಣೆ ಹಿನ್ನೆಲೆ: ಪ್ರಧಾನಿ ನರೇಂದ್ರ ಮೋದಿ ನಾಳೆ ಪಂಜಾಬ್‌ಗೆ ಭೇಟಿ
3. ದೇಶದಾದ್ಯಂತ ೨೫ ಕೋಟಿಗೂ ಹೆಚ್ಚು ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ರೈತರಿಗೆ ವಿತರಿಸಿದ ಕೇಂದ್ರ ಸರ್ಕಾರ
4. ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್: ಭಾರತ - ನ್ಯೂಜಿಲೆಂಡ್ ತಂಡ ಮುಖಾಮುಖಿ

<><><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಾಳೆ ಲೋಕಸಭೆಯಲ್ಲಿ ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ಅನ್ನು ಮಂಡಿಸಲಿದ್ದಾರೆ. ಲೋಕಸಭೆಯಲ್ಲಿ ಬಜೆಟ್ ಮಂಡಿಸಿದ ನಂತರ, ಬಜೆಟ್ ಪ್ರತಿಯನ್ನು ರಾಜ್ಯಸಭೆಯಲ್ಲಿ ಮಂಡಿಸಲಾಗುವುದು. ೨೦೧೯ರಲ್ಲಿ ಅಧಿಕಾರ ವಹಿಸಿಕೊಂಡ ನಂತರ ನಿರ್ಮಲಾ ಸೀತಾರಾಮನ್ ಅವರ ಸತತ ಒಂಬತ್ತನೇ ಬಜೆಟ್ ಮಂಡನೆ ಇದಾಗಿದೆ. ಇದು ನರೇಂದ್ರ ಮೋದಿ ಸರ್ಕಾರದ ಮೂರನೇ ಬಜೆಟ್ ಆಗಿದೆ. ಸಂಸತ್ತಿನಲ್ಲಿ ಬಜೆಟ್ ಭಾಷಣ ಮುಗಿದ ನಂತರ ಬಜೆಟ್ ದಾಖಲೆಗಳು ಮೊಬೈಲ್ ಅಪ್ಲಿಕೇಶನ್ ಮತ್ತು ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತವೆ. ಬಜೆಟ್ ಸಿದ್ಧತೆಗೆ ಮುನ್ನ, ಹಣಕಾಸು ಸಚಿವರು, ಅರ್ಥಶಾಸ್ತ್ರಜ್ಞರು, ಕಾರ್ಮಿಕ ಸಂಘಗಳು, ಶಿಕ್ಷಣ ಮತ್ತು ಆರೋಗ್ಯ ವಲಯ, ಎಂಎಸ್‌ಎಂಇ, ವ್ಯಾಪಾರ ಮತ್ತು ಸೇವೆಗಳು, ಕೈಗಾರಿಕೆ, ಹಣಕಾಸು ವಲಯ ಹಾಗೂ ಬಂಡವಾಳ ಮಾರುಕಟ್ಟೆ ತಜ್ಞರು ಮತ್ತು ಪ್ರತಿನಿಧಿಗಳು ಸೇರಿದಂತೆ ಹಲವಾರು ಪಾಲುದಾರರೊಂದಿಗೆ ಬಜೆಟ್ ಪೂರ್ವ ಸಮಾಲೋಚನಾ ಸಭೆಗಳನ್ನು ನಡೆಸಿದರು. ಕೃಷಿ ಸಚಿವ ಶಿವರಾಜ್ ಸಿಂಗ್ ಅವರು ಕೃಷಿ ಮತ್ತು ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದ ವಿವಿಧ ಅಂಶಗಳ ಕುರಿತು ವ್ಯಾಪಕವಾದ ಪೂರ್ವ-ಬಜೆಟ್ ಸಮಾಲೋಚನೆಗಳನ್ನು ನಡೆಸಿದ್ದು, ಸಲಹೆಗಳ ಸಂಕಲನ ವರದಿಯನ್ನು ಹಣಕಾಸು ಸಚಿವರಿಗೆ ಸಲ್ಲಿಸಿದ್ದರು. ಬಜೆಟ್ ತಯಾರಿಕೆ ಸಮಯದಲ್ಲಿ, ವಿವಿಧ ವೇದಿಕೆಗಳ ಮೂಲಕ ಯುವಕರು ಸೇರಿದಂತೆ ನಾಗರಿಕರಿಂದ ವಿವಿಧ ಸಲಹೆಗಳನ್ನು ಪಡೆಯಲಾಗಿದೆ.

<><><><>

ನಾಳೆ ಕೇಂದ್ರ ಬಜೆಟ್ ೨೦೨೬-೨೭ ಮಂಡನೆಯ ನಂತರ ದೇಶದ ವಿವಿಧ ಪ್ರದೇಶಗಳ ಸುಮಾರು ಮೂವತ್ತು ಕಾಲೇಜು ವಿದ್ಯಾರ್ಥಿಗಳೊಂದಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಂವಾದ ನಡೆಸಲಿದ್ದಾರೆ. ಈ ಉಪಕ್ರಮದ ಭಾಗವಾಗಿ, ಕಾಲೇಜು ವಿದ್ಯಾರ್ಥಿಗಳು ಲೋಕಸಭೆಯ ಗ್ಯಾಲರಿಯಿಂದ ಕೇಂದ್ರ ಬಜೆಟ್‌ನ ನೇರ ಪ್ರಸ್ತುತಿಯನ್ನು ವೀಕ್ಷಿಸುವ ಅವಕಾಶ ಪಡೆಯಲಿದ್ದಾರೆ. ಇದು ವಿದ್ಯಾರ್ಥಿಗಳಿಗೆ ವರ್ಷದ ಅತ್ಯಂತ ಮಹತ್ವದ ಸಂಸತ್ತಿನ ಕಲಾಪಗಳಲ್ಲಿ ಒಂದನ್ನು ವೀಕ್ಷಿಸುವ ಅವಕಾಶ ನೀಡುತ್ತದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

ದೇಶಾದ್ಯಂತ ವಿವಿಧ ರಾಜ್ಯಗಳಿಂದ ವಾಣಿಜ್ಯ, ಅರ್ಥಶಾಸ್ತ್ರ, ವೈದ್ಯಕೀಯ ಶಿಕ್ಷಣ ಮತ್ತು ವೃತ್ತಿಪರ ಕೋರ್ಸ್‌ಗಳು ಸೇರಿದಂತೆ ವಿವಿಧ ಶೈಕ್ಷಣಿಕ ವಿಭಾಗಗಳಿಂದ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ. ವಿದ್ಯಾರ್ಥಿಗಳು ಕರ್ತವ್ಯ ಭವನ-೧ರಲ್ಲಿರುವ ಹಣಕಾಸು ಸಚಿವಾಲಯಕ್ಕೂ ಭೇಟಿ ನೀಡಲಿದ್ದು, ಸಚಿವಾಲಯದ ಕಾರ್ಯವೈಖರಿ, ನೀತಿ ನಿರೂಪಣಾ ಪ್ರಕ್ರಿಯೆಗಳು ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಸಂಸ್ಥೆಗಳ ಪಾತ್ರದ ಬಗ್ಗೆ ತಿಳಿವಳಿಕೆ ಪಡೆಯಲು ವಿವಿಧ ಹಿರಿಯ ಅಧಿಕಾರಿಗಳೊಂದಿಗೆ ಸಂವಹನ ನಡೆಸಲಿದ್ದಾರೆ. ನಂತರ ಸಚಿವೆ ನಿರ್ಮಲಾ ಸೀತಾರಾಮನ್ ಅವರು, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದು, ಬಜೆಟ್‌ನ ಪ್ರಮುಖ ಆದ್ಯತೆಗಳು, ಭಾರತದ ಭವಿಷ್ಯಕ್ಕಾಗಿ ಅದರ ದೃಷ್ಟಿಕೋನ ಮತ್ತು ಯುವಕರಿಗೆ ಬಜೆಟ್ ಪರಿಣಾಮಗಳ ಕುರಿತ ಚರ್ಚೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಉಪಕ್ರಮವು ವಿದ್ಯಾರ್ಥಿಗಳಲ್ಲಿ ಹಣಕಾಸು, ಅರ್ಥಶಾಸ್ತ್ರ, ಆಡಳಿತ ಮತ್ತು ಪ್ರಜಾಪ್ರಭುತ್ವ ಪ್ರಕ್ರಿಯೆಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಗುರಿ ಹೊಂದಿದೆ.

<><><><>

ಸಂತ ಗುರು ರವಿದಾಸರ ೬೪೯ನೇ ಜನ್ಮ ದಿನಾಚರಣೆ ಸಂದರ್ಭದಲ್ಲಿ, ಪ್ರಧಾನಿ ನರೇಂದ್ರ ಮೋದಿ ನಾಳೆ ಪಂಜಾಬ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಪ್ರಧಾನಿ ಅವರು ಆದಂಪುರ ವಿಮಾನ ನಿಲ್ದಾಣಕ್ಕೆ ಭೇಟಿ ನೀಡಲಿದ್ದು, ಶ್ರೀ ಗುರು ರವಿದಾಸ್ ಜಿ ವಿಮಾನ ನಿಲ್ದಾಣ, ಆದಂಪುರ ಎಂಬ ನೂತನ ಹೆಸರನ್ನು ಅನಾವರಣಗೊಳಿಸಲಿದ್ದಾರೆ. ಆದಂಪುರ ವಿಮಾನ ನಿಲ್ದಾಣದ ಮರುನಾಮಕರಣವು ಶ್ರೇಷ್ಠ ಸಂತ ಮತ್ತು ಸಾಮಾಜಿಕ ಸುಧಾರಕರನ್ನು ಗೌರವಿಸುತ್ತದೆ. ಶ್ರೀ ಗುರು ರವಿದಾಸ್ ಜಿ ಅವರ ತತ್ವ ಮತ್ತು ಸಿದ್ಧಾಂತಗಳು ಸಮಾನತೆ, ಕರುಣೆ ಮತ್ತು ಮಾನವ ಘನತೆಯ ಬೋಧನೆಗಳು ಭಾರತದ ಸಾಮಾಜಿಕ ನೀತಿಯನ್ನು ನಿರಂತರವಾಗಿ ಪ್ರೇರೇಪಿಸುತ್ತಿದೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ. ಪ್ರಧಾನಿ ಅವರು ಈ ಸಂದರ್ಭದಲ್ಲಿ ಲೂಧಿಯಾನದ ಹಲ್ವಾರ ವಿಮಾನ ನಿಲ್ದಾಣದಲ್ಲಿ ಟರ್ಮಿನಲ್ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಲೂಧಿಯಾನ ಮತ್ತು ಅದರ ಸುತ್ತಮುತ್ತಲಿನ ಕೈಗಾರಿಕಾ ಮತ್ತು ಕೃಷಿ ಪ್ರದೇಶಗಳಿಗೆ ಸೇವೆ ಸಲ್ಲಿಸುವ ಮೂಲಕ ಈ ಕಟ್ಟಡವು ರಾಜ್ಯಕ್ಕೆ ನೂತನ ಅವಕಾಶವನ್ನು ಒದಗಿಸಲಿದೆ.   ಭಾರತೀಯ ವಾಯುಪಡೆಯ ಪ್ರಮುಖ

ಕಾರ್ಯತಂತ್ರದ ನಿಲ್ದಾಣಕ್ಕೂ ಹಲ್ವಾರ ನೆಲೆಯಾಗಿದೆ. ಲೂಧಿಯಾನದಲ್ಲಿನ ಹಿಂದಿನ ವಿಮಾನ ನಿಲ್ದಾಣವು ಹೋಲಿಕೆಯಲ್ಲಿ ಸಣ್ಣ ರನ್‌ವೇ ಹೊಂದಿದ್ದು, ಕಿರು ಗಾತ್ರದ ವಿಮಾನಗಳಿಗೆ ಸೂಕ್ತವಾಗಿದೆ. ಸಂಪರ್ಕ ಸುಧಾರಣೆ ಮತ್ತು ದೊಡ್ಡ ವಿಮಾನಗಳಿಗೆ ಅವಕಾಶ ಕಲ್ಪಿಸಲು, ಹಲ್ವಾರದಲ್ಲಿ ಹೊಸ ನಾಗರಿಕ ಎನ್‌ಕ್ಲೇವ್ ಅನ್ನು ಅಭಿವೃದ್ಧಿಪಡಿಸಲಾಗಿದೆ, ಇದು ಎ೩೨೦-ಮಾದರಿಯ ವಿಮಾನಗಳನ್ನು ನಿರ್ವಹಿಸುವ ಸಾಮರ್ಥ್ಯವಿರುವ ಉದ್ದವಾದ ರನ್‌ವೇ ಹೊಂದಿದೆ.

<><><><>

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರು ಭಾರತದ ರಾಮ್ಸರ್ ಜಾಲಕ್ಕೆ ಎರಡು ಹೊಸ ಜೌಗು ಪ್ರದೇಶಗಳನ್ನು ಸೇರಿಸುವುದಾಗಿ ಘೋಷಿಸಿದ್ದಾರೆ. ಅವುಗಳೆಂದರೆ ಉತ್ತರ ಪ್ರದೇಶದ ಎಟಾ ಜಿಲ್ಲೆಯ ಪಾಟ್ನಾ ಪಕ್ಷಿಧಾಮ ಮತ್ತು ಗುಜರಾತ್‌ನ ಕಚ್ ಜಿಲ್ಲೆಯ ಛರಿ-ಢಂಡ್.  ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಭಾರತದ ರಾಮ್ಸರ್ ಜಾಲವು ಶೇಕಡ ೨೭೬ ಕ್ಕಿಂತ ಹೆಚ್ಚು ವಿಸ್ತರಿಸಿದೆ. ೨೦೧೪ರಲ್ಲಿ ೨೬ ತಾಣಗಳಿಂದ ಪ್ರಸ್ತುತ ೯೮ ತಾಣಗಳಿಗೆ ಏರಿಕೆಯಾಗಿದೆ. ಅಂತಾರಾಷ್ಟ್ರೀಯ ಮನ್ನಣೆಯು ಪರಿಸರ ರಕ್ಷಣೆ ಮತ್ತು ಜೌಗು ಪ್ರದೇಶಗಳನ್ನು ಸಂರಕ್ಷಿಸಲು ಭಾರತದ ಬಲವಾದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ತಿಳಿಸಿದ್ದಾರೆ. ಈ ನಡುವೆ, ಉತ್ತರ ಪ್ರದೇಶದ ಎಟಾದಲ್ಲಿರುವ ಪಾಟ್ನಾ ಪಕ್ಷಿಧಾಮ ಮತ್ತು ಗುಜರಾತ್‌ನ ಕಚ್‌ನಲ್ಲಿರುವ ಛರಿ-ಢಂಡ್ ಅನ್ನು ರಾಮ್‌ಸರ್ ತಾಣಗಳ ಪಟ್ಟಿಯಲ್ಲಿ ಸೇರಿಸಿರುವುದಕ್ಕೆ ಪ್ರಧಾನಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಈ ಜಿಲ್ಲೆಗಳ ಸ್ಥಳೀಯ ನಾಗರಿಕರಿಗೆ ಮತ್ತು ಜೌಗು ಪ್ರದೇಶ ಸಂರಕ್ಷಣೆಯ ಬಗ್ಗೆ ಆಸಕ್ತಿ ಹೊಂದಿರುವ ಎಲ್ಲರಿಗೂ ಅಭಿನಂದನೆ ಸಲ್ಲಿಸಿದ್ದಾರೆ.

<><><><>

ದೇಶಾದ್ಯಂತ ೨೫ ಕೋಟಿಗೂ ಹೆಚ್ಚು ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ರೈತರಿಗೆ ವಿತರಿಸಲಾಗಿದೆ. ಮಣ್ಣಿನ ಪೋಷಕಾಂಶಗಳ ಕುಸಿತವನ್ನು ಪರಿಹರಿಸುವ ಉದ್ದೇಶದಿಂದ ಸರ್ಕಾರವು ೨೦೧೫ರಲ್ಲಿ ಮಣ್ಣಿನ ಆರೋಗ್ಯ ಕಾರ್ಡ್ ಯೋಜನೆಯನ್ನು ಪ್ರಾರಂಭಿಸಿತ್ತು.  ಕಳೆದ ವರ್ಷದ ಜುಲೈ ವೇಳೆಗೆ, ಈ ಯೋಜನೆಯಡಿ ೯೩ ಸಾವಿರಕ್ಕೂ ಹೆಚ್ಚು ರೈತರಿಗೆ ತರಬೇತಿ ಕಾರ್ಯಕ್ರಮಗಳು, ೬ ಲಕ್ಷಕ್ಕೂ ಹೆಚ್ಚು ಕ್ಷೇತ್ರ ಪ್ರದರ್ಶನಗಳು ಮತ್ತು ಸಾವಿರಾರು ಜಾಗೃತಿ ಅಭಿಯಾನಗಳನ್ನು ನಡೆಸಲಾಯಿತು. ಸಮತೋಲಿತ ಪೋಷಕಾಂಶ ನಿರ್ವಹಣೆಯನ್ನು ಉತ್ತೇಜಿಸುವಲ್ಲಿ ಇದು ಯೋಜನೆಯ ಪ್ರಮಾಣ ಹಾಗೂ ವ್ಯಾಪ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಸರ್ಕಾರ ಹೇಳಿದೆ. ಮಣ್ಣಿನ ಆರೋಗ್ಯ ಕಾರ್ಡ್ ಅನ್ನು ಪ್ರತಿ ಎರಡು ವರ್ಷಗಳಿಗೊಮ್ಮೆ ನೀಡಲಾಗುತ್ತದೆ ಮತ್ತು ರೈತರಿಗೆ ಅವರ ಮಣ್ಣಿನ ಪೋಷಕಾಂಶಗಳ ಸ್ಥಿತಿ ಮತ್ತು ಭೌತ ರಾಸಾಯನಿಕ ಪರಿಸ್ಥಿತಿಗಳ ಬಗ್ಗೆ ಸಮಗ್ರ ತಿಳುವಳಿಕೆಯನ್ನು

ಒದಗಿಸುತ್ತದೆ. ಇದು ರಾಸಾಯನಿಕ ಗೊಬ್ಬರಗಳು, ಜೈವಿಕ ಗೊಬ್ಬರಗಳು, ಸಾವಯುವ ಒಳಹರಿವು ಮತ್ತು ಮಣ್ಣಿನ ಸಂಸ್ಕರಣೆಗಳ ಸೂಕ್ತ ಬಳಕೆಯ ಕುರಿತು ಬೆಳೆ-ನಿರ್ದಿಷ್ಟ ಶಿಫಾರಸುಗಳನ್ನು ಸಹ ನೀಡುತ್ತದೆ, ಇದು ತಿಳುವಳಿಕೆಯುಳ್ಳ ನಿರ್ಧಾರ ತೆಗೆದುಕೊಳ್ಳುವಿಕೆ ಮತ್ತು ದೀರ್ಘಕಾಲೀನ ಮಣ್ಣಿನ ಆರೋಗ್ಯ ನಿರ್ವಹಣೆಯನ್ನು ಬೆಂಬಲಿಸುತ್ತದೆ.

<><><>

ಏಳನೇ ಸಿಖ್ ಗುರು ಧನ್ ಧನ್ ಶ್ರೀ ಗುರು ಹರ್ ರೈ ಸಾಹಿಬ್ ಜಿ ಅವರ ಪ್ರಕಾಶ್ ಪುರಬ್ ಹಬ್ಬದ ಅಂಗವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಜನತೆಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಲಂಗರ್ ಮತ್ತು ಸಂಗತ್ ಸಂಪ್ರದಾಯಗಳನ್ನು ಬಲಪಡಿಸಿದ ಗುರು ಹರ್ ರೈ ಸಾಹಿಬ್ ಜಿ ಅವರ ಬೋಧನೆಗಳು ಸಹಾನುಭೂತಿ ಮತ್ತು ಸೂಕ್ಷ್ಮತೆಯ ಮೂಲವಾಗಿದೆ. ಅವರು ತಮ್ಮ ಔಷಧಿಗಳ ಮೂಲಕ ಪ್ರತಿಯೊಂದು ಜಾತಿ, ವರ್ಗ ಮತ್ತು ಸಮುದಾಯದ ಜನರಿಗೆ ನೀಡಿದ ಮಾನವೀಯ ಸೇವೆಯನ್ನು ಸಚಿವರು ಸ್ಮರಿಸಿದ್ದಾರೆ.

<><><>

ತಮಿಳುನಾಡಿನ ತಿರುಚಿರಾಪಳ್ಳಿಯಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಅಪಘಾತದಲ್ಲಿ ನಾಲ್ವರು ಮಹಿಳೆಯರು ಮೃತಪಟ್ಟಿದ್ದಾರೆ. ಚೆನ್ನೈ-ತಿರುಚಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಸುಮಾರು ಐದು ಗಂಟೆ ಸುಮಾರಿಗೆ ಈ ಅವಘಡ ಸಂಭವಿಸಿದೆ. ಮೃತಪಟ್ಟವರು ಸಮಯಪುರಂ ದೇವಸ್ಥಾನಕ್ಕೆ ಪಾದಯಾತ್ರೆಯಲ್ಲಿ ತೆರಳುತ್ತಿದ್ದಾಗ ಕಾರು ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ಗಾಯಗೊಂಡ ಮತ್ತೊಬ್ಬ ಮಹಿಳೆಯನ್ನು ಪೆರಂಬಲೂರಿನ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

<><><>

ದೆಹಲಿಯಲ್ಲಿಂದು ನಡೆಯಲಿರುವ ಎರಡನೇ ಭಾರತ-ಅರಬ್ ವಿದೇಶಾಂಗ ಸಚಿವರ ಸಭೆಗೆ ಮುಂಚಿತವಾಗಿ ಓಮನ್ ವಿದೇಶಾಂಗ ಸಚಿವ ಬದರ್ ಅಲ್ಬುಸೈದಿ ಇಂದು ನವದೆಹಲಿಗೆ ಆಗಮಿಸಿದ್ದಾರೆ. ಅವರ ಭೇಟಿ ಭಾರತ ಮತ್ತು ಒಮಾನ್ ನಡುವಿನ ಬಹುಮುಖಿ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದೆ. ಯುನೈಟೆಡ್ ಅರಬ್ ಎಮಿರೇಟ್ಸ್ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಖಲೀಫಾ ಶಾಹೀನ್ ಅಲ್ ಮರಾರ್ ಕೂಡ ಸಭೆಯಲ್ಲಿ ಭಾಗವಹಿಸಲು ನವದೆಹಲಿಗೆ ಆಗಮಿಸಿದ್ದಾರೆ. ಮರಾರ್ ಅವರ ಭೇಟಿಯು ಭಾರತ ಮತ್ತು ಯುಎಇ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><>

ತಿರುವನಂತಪುರದಲ್ಲಿಂದು ಸಂಜೆ ನಡೆಯಲಿರುವ ಪುರುಷರ ಐದನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಭಾರತ, ನ್ಯೂಜಿಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

<><><><>

ಥೈಲ್ಯಾಂಡ್ ಮಾಸ್ಟರ್ಸ್ ೨೦೨೦ರ ಬ್ಯಾಡ್ಮಿಂಟನ್ ಟೂರ್ನಿ ಸೆಮಿಫೈನಲ್ಸ್‌ನಲ್ಲಿಂದು ಭಾರತದ ದೇವಿಕಾ ಸಿಹಾಗ್, ಚೀನಾ ತೈಪೆಯ ಐದನೇ ಶ್ರೇಯಾಂಕಿತೆ ಹುವಾಂಗ್ ಯು ಸುನ್ ಅವರನ್ನು ಎದುರಿಸಲಿದ್ದಾರೆ. ಭಾರತೀಯ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ ೧.೪೫ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>